## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
## ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬೆಳ್ತಂಗಡಿ.

## ಅಪರಾಧ ಪ್ರಕರಣ ಸಂಖ್ಯೆ **785/2017**

**ಚಾಸಾಃ 7 ಫ್ರಾಸಾಃ 5**

| | |
|---|---|
| ಹೆಸರು | : ರತ್ನಾಕರ |
| ತಂದೆಯ ಹೆಸರು | : ಎನ್ ಕೆ ಪೂಜಾರಿ |
| ಫ್ರಾಯ | : 51 ವರ್ಷ |
| ಉದ್ಯೋಗ | : ಅಂಗಡಿ ವ್ಯಾಪಾರ |
| ವಾಸ | : ಚಿಬಿದ್ರೆ ಗ್ರಾಮ, ಬೆಳ್ತಂಗಡಿ ತಾಲೂಕು |

ದಿನಾಂಕ 25-6-2024 ರಂದು ಸಾಕ್ಷಿಗೆ ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಸದರಿ ದಾಖಲೆಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲೆಯಲ್ಲಿ ತನ್ನ ಕಸಹಿ ಇಲ್ಲವೆಂದು ತಿಳಿಸಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ಹಾಗೂ ಏನನ್ನೂ ಅಮಾನತುಪಡಿಸಿಕೊಂಡಿರುವುದಿಲ್ಲ. ನಾನು ಯಾವುದೇ ಆರೋಪಿಗಳನ್ನು ನೋಡಿರುವುದಿಲ್ಲ.

*(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)*

ಪಾಟೀ ಸವಾಲುಃ ಮಾನ್ಯ ಸ. ಸ. ಅ. ರವರಿಂದಃ

ದಿನಾಂಕ 27-7-2017 ರಂದು ಬೆಳ್ತಂಗಡಿ ತಾಲೂಕು ಚಾರ್ಮಾಡಿ ಗ್ರಾಮದ ಚಾರ್ಮಾಡಿ ಎಂಬಲ್ಲಿ ನನ್ನ ಹಾಗೂ ಚಾಸಾ-8 ರವರ ಸಮಕ್ಷಮ ಬೆಳಗ್ಗೆ 6 ರಿಂದ 7 ಗಂಟೆ ವರೆಗೆ ಮಹಜರ್ ಕ್ರಮ ಜರುಗಿಸಿ ಬಜಾಜ್ ಕಂಪನಿಯ ಕೆ ಟಿ ಎಂ ಡ್ಯೂಕ್ ಬೈಕ್ ಮತ್ತು ಕೆಎ41 ಇ ಜೆ 9909 ಗಳನ್ನು ನಮ್ಮ ಸಮಕ್ಷಮ ಅಮಾನತುಪಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಸ್ಥಳದಲ್ಲಿ ಹಾಜರಿದ್ದು ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಪೊಲೀಸರು ಬೈಕಿನಲ್ಲಿ ಸವಾರಿ ಮಾಡಿಕೊಂಡು ಬಂದವರು 1 ನೇ ಆರೋಪಿ ಉಮೇಶ್ ಮತ್ತು

www.ecourtsindia.com

This is a True Copy of the Court Records Online. Authenticated @ districts.ecourtsindia.com/cnr/KADK510014832017/truecopy/order-4.pdf

ವೆಂಕಟೇಶ್ ಮತ್ತು ನವೀನ್ ಎಂಬುವವರು ಸ್ಥಳದಿಂದ ತಪ್ಪಿಸಿಕೊಂಡು ಪರಾರಿಯಾಗಿರುವ ಬಗ್ಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯ ಅಂಗಜಪ್ತಿ ಮಾಡಲಾಗಿ ನೋಕಿಯ ಕಂಪನಿಯ ಮೊಬೈಲ್ ಫೋನ್ ಮತ್ತು ಕೆಚೋಡ ಕಂಪನಿಯ ಮೊಬೈಲ್ ಫೋನ್ ಮತ್ತು 1 ನೇ ಆರೋಪಿಯ ಕಿಸೆಯಲ್ಲಿದ್ದ ರೂ. 2000, ಮತ್ತು ಸಿಸಿ 657/2017 ರ 2 ನೇ ಆರೋಪಿ ವೆಂಕಟೇಶ್ ಎಂಬುವವನ ವಶದಲ್ಲಿದ್ದ ನೋಕಿಯ ಕಂಪನಿಯ ಮೊಬೈಲ್ ಮತ್ತು ಕಂದು ಬಣ್ಣದ ಪರ್ಸ್ ನಲ್ಲಿದ್ದ ಚಾಲಾನ ಪರವಾನಗಿ, ಆಧಾರ್ ಕಾರ್ಡ್ ಮತ್ತು ರೂ. 1010 ಗಳನ್ನು ಅಮಾನತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ದಾಖಲೆಗೆ ಸಹಿ ಮಾಡಿದ್ದರೂ ಸಹ ಸಹಿ ಮಾಡಿರುವುದಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿಗಳ ಪರ ಶ್ರೀ ಪಿ ಎಂ ವಕೀಲರಿಂದಃ

ಏನೂ ಇರುವುದಿಲ್ಲ.

ಮರು ವಿಚಾರಣೆ ಇರುವುದಿಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ. ದ. ನ್ಯಾ ದಂ.ಗಳು ಬೆಳ್ತಂಗಡಿ.

**(ಸಾ. ಓ. ಹೇ. ಕೇ. ಸ. ಇ. ಎ. ಒ.)**

This is a True Copy of the Court Records Online. Authenticated @ districts.ecourtsindia.com/cnr/KADK510014832017/truecopy/order-4.pdf